<u>ಅಸಲು ದಾವಾ ಸಂಖ್ಯೆ **-207/2021**</u> ಪಿ.ಡಬ್ಲ್ಯೂ**:-3**

ದಿನಾಂಕಃ **24.10.2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

ವಾದಿಯು ಈ ದಾವೆಯಲ್ಲಿ ನನ್ನನ್ನು ಸಾಕ್ಷಿದಾರರನ್ನಾಗಿ ಮಾಡಿದ್ದೇನೆ ಆದ ಕಾರಣ ನ್ಯಾಯಾಲಯಕ್ಕೆ ಬಂದು ಸಾಕ್ಷಿಯನ್ನು ಹೇಳುತ್ತೀರಾ ಎಂದು ಹೇಳಿದಾಗ ನಾನು ವಾದಿಯ ಜಮೀನಿನ ಪಕ್ಕದಲ್ಲಿರುವುದರಿಂದ ನ್ಯಾಯಾಲಯಕ್ಕೆ ಬಂದು ಸಾಕ್ಷಿಯನ್ನು ಹೇಳುತ್ತಿದ್ದೇನೆ. ದಾವಾ ಆಸ್ತಿಯ ಪಕ್ಕದಲ್ಲಿ ನನಗೆ ಸೇರಿದ ಸರ್ವೇ ನಂ.3 ರ ಆಸ್ತಿಯು ಇರುತ್ತದೆ. ದಾವಾ ಆಸ್ತಿಯ ಪಕ್ಕದಲ್ಲಿ ನನಗೆ ಸೇರಿದ ಸರ್ವೇ ನಂ.3 ರ ಆಸ್ತಿ ಇರುವ ಬಗ್ಗೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ. ಆದರೆ ಹಾಜರುಪಡಿಸುತ್ತೇನೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಯ ಪೂರ್ವ ದಿಕ್ಕಿಗೆ ನನಗೆ ಸೇರಿದ ಆಸ್ತಿ ಇರುತ್ತದೆ. ವಾದಿಯು ದಾವಾ ಆಸ್ತಿಯ ಪೂರ್ವಕ್ಕೆ ನನ್ನ ಆಸ್ತಿ ಬರುವ ಬಗ್ಗೆ ದಾಖಲಾತಿಗಳನ್ನು ಹಾಜರುಪಡಿಸುವ ಬಗ್ಗೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯು ಮೂಲತಃ ಬಸಪ್ಪರವರಿಗೆ ಸೇರಿದ ಆಸ್ತಿಯಾಗಿರುತ್ತದೆ. ದಾವಾ ಆಸ್ತಿಯು ಬಸಪ್ಪರವರಿಗೆ ಹೇಗೆ ಬಂತು ಎಂಬ ವಿಚಾರ ನನಗೆ ಗೊತ್ತಿಲ್ಲ. ಸರ್ವೇ ನಂ.4/21 ರಲ್ಲಿ ಒಟ್ಟು 2 ½ ಅಥವಾ 2 ¾ ಇರಬಹುದು. ದಾವಾ ಆಸ್ತಿಯು ನಿರ್ದಿಷ್ಟವಾಗಿ ಎಷ್ಟು ವಿಸ್ತೀರ್ಣ ಇದೆ ಎಂದು ನಾನು ದಾಖಲಾತಿಗಳನ್ನು ನೋಡಿರುವುದಿಲ್ಲ. ಪ್ರತಿವಾದಿ ಚಟ್ನಹಳ್ಳಿ ಗ್ರಾಮದ ವಾಸಿ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಪಹಣಿ, ಮುಟೇಷನ್ ಮತ್ತು ಋಣಭಾರ ರಹಿತ ದಾಖಲಾತಿಗಳನ್ನು ನಾನು ನೋಡಿರುವುದಿಲ್ಲ. ದಾವಾ ಆಸ್ತಿಯ ಖಾತೆ ಮತ್ತು ಪಹಣಿ ವಾದಿಯ ಹೆಸರಿನಲ್ಲಿರುವ ಬಗ್ಗೆ ನಾನು ಯಾವುದೇ ದಾಖಲಾತಿಗಳನ್ನು ಮತ್ತು ಪತ್ರಗಳನ್ನು ನೋಡಿರುವುದಿಲ್ಲ. ಸಾಕ್ಷಿಯು ಮುಂದುವರೆದು ನಾನು ದಾವಾ ಆಸ್ತಿಯ ಪಕ್ಕದಲ್ಲೇ ನನ್ನ ಜಮೀನು ಇದ್ದು ಮತ್ತು

ವಾದಿಯು ದಾವಾ ಆಸ್ತಿಯನ್ನು ಖರೀದಿ ಮಾಡಿದ ದಿನದಿಂದಲೂ ಸ್ವಾಧೀನಾನುಭದಲ್ಲಿದ್ದಾರೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಯನ್ನು ವಾದಿಯ ಪೂರ್ವಜರು ಖರೀದಿ ಮಾಡಿದ ಸಮಯದಲ್ಲಿ ನಾನು ಹುಟ್ಟಿರಲಿಲ್ಲ. ಆಗಾಗ್ಗೆ ಸದರಿ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿ. ವಾದಿಯ ಕುಟುಂಬದ ವಂಶವೃಕ್ಷವನ್ನು ನಾನು ನೋಡಿರುವುದಿಲ್ಲ. ದಾವಾ ಆಸ್ತಿಯ ಖಾತೆ ಮತ್ತು ಪಹಣಿ ಪ್ರತಿವಾದಿಯ ಹೆಸರಿನಲ್ಲಿ ಇದೆ ಎಂದರೆ ಸಾಕ್ಷಿಯು ಅದರಲ್ಲಿ 37 ½ ಗುಂಟೆ ಜಮೀನು ಹೊರತುಪಡಿಸಿ ಉಳಿದ ಜಮೀನು ಪ್ರತಿವಾದಿಯ ಹೆಸರಿನಲ್ಲಿ ಇರಬಹುದು ಎಂದು ನುಡಿಯುತ್ತಾರೆ. ಸದರಿ ಮೇಲ್ಕಂಡ ವಿಚಾರದ ಬಗ್ಗೆ ನಾನು ದಾಖಲಾತಿಗಳನ್ನು ನೋಡಿರುವುದಿಲ್ಲ. ನಾನು, ವಾದಿ, ಸಾಕ್ಷಿದಾರರಾದ ಮಂಜಪ್ಪ ಮತ್ತು ಓಂಕಾರಪ್ಪ ಒಂದೇ ಊರಿನವರು ಮತ್ತು ಅನ್ಯೋನ್ಯವಾಗಿದ್ದೇವೆ ಎಂದರೆ ಸರಿ. ನಾನು ವಾದಿಯ ಜೊತೆ ಅನ್ಯೋನ್ಯವಾಗಿದ್ದರಿಂದ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ ವಾದಿಯ ಮಾತುಕೇಳಿಕೊಂಡು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮಾಲೀಕರು ಮತ್ತು ಸ್ವಾಧೀನಾನುಭವದಲ್ಲಿ ಪ್ರತಿವಾದಿ ಇದ್ದು ಮತ್ತು ದಾವಾ ಆಸ್ತಿಯಲ್ಲಿ ವಾದಿಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲದಿದ್ದರೂ ಸಹ ಪ್ರತಿವಾದಿಗೆ ಸೇರಿದ ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ವಾದಿಯ ಜೊತೆ ಶಾಮೀಲಾಗಿ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.